## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಧಾರವಾಡ ಜಿಲ್ಲಾ ಪಂಚಾಯತಿಯಲ್ಲಿ 2013–14ನೇ ಸಾಲಿನಲ್ಲಿ ಲೆ.ಶೀ.3054ರಡಿ ಕೈಗೊಂಡ ಕಾಮಗಾರಿಗಳ ಬಿಲ್ ಪಾವತಿಗೆ ಲೆ.ಶೀ.3054(ಯೋಜನೆ) ಅಡಿ ಅನುದಾನ ಬಿಡುಗಡೆ ಮಾಡುವ ಕುರಿತು.

ಓದಲಾಗಿದೆ:
1. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ:9/1:ಆರ್‌ಆರ್‌ಸಿ:2014, ದಿ:03.03.2014.
2. ಆರ್ಥಿಕ ಇಲಾಖೆಯ ಟಿಪ್ಪಣಿ ಕಂಡಿಕೆ ಸಂಖ್ಯೆ:ಆಇ:230:ವೆಚ್ಚ-6:2014, ದಿ:02.03.2015.

ಪ್ರಸ್ತಾವನೆ:

ಧಾರವಾಡ ಜಿಲ್ಲಾ ಪಂಚಾಯತಿಯಲ್ಲಿ 2013–14ನೇ ಸಾಲಿನಲ್ಲಿ ಗ್ರಾಮೀಣ ರಸ್ತೆ ಅಭಿವೃದ್ಧಿ ಕಾಮಗಾರಿಗಾಗಿ ಲೆ.ಶೀ.3054–80–196–1–03–300(ಯೋಜನೆ) ರಡಿ ಅನುದಾನ ಹಂಚಿಕೆ ಮಾಡಿ ಸದರಿ ಕಾಮಗಾರಿಗಳನ್ನು ಜಿಲ್ಲಾ ಪಂಚಾಯತಿ ವ್ಯಾಪ್ತಿಯಿಂದ ಕೈಗೊಳ್ಳಲು ರೂ.295.00ಲಕ್ಷ ಮೊತ್ತಕ್ಕೆ ಆಡಳಿತಾತ್ಮಕ ಅನುಮೋದನೆ ನೀಡಿ ಮೇಲೆ ಓದಲಾದ 1ರಲ್ಲಿ ಆದೇಶವನ್ನು ಇಲಾಖೆಯಿಂದ ಹೊರಡಿಸಲಾಗಿತ್ತು. ಸದರಿ ಆದೇಶದಂತೆ ಮೇಲೆ ಓದಲಾದ 2ರಲ್ಲಿ ಆರ್ಥಿಕ ಇಲಾಖೆಯು ಪ್ರಸ್ತುತ ಸಾಲಿನ ಲೆ.ಶೀ.3054–80–196–1–03–300(ಯೋಜನೆ)ರಡಿ ಅನುದಾನದಿಂದ ಬಿಡುಗಡೆ ಮಾಡಲು ತಿಳಿಸಲಾಗಿದೆ. ಅದರಂತೆ ಪ್ರಸ್ತುತ ವರ್ಷದಲ್ಲಿ ಸಿ.ಎಂ.ಜಿ.ಎಸ್.ವೈ. ಲೆಕ್ಕ ಶೀರ್ಷಿಕೆ-3054(ಯೋಜನೆ) ಅಡಿ ರೂ.295.00ಲಕ್ಷಗಳನ್ನು ಧಾರವಾಡ ಜಿಲ್ಲಾ ಪಂಚಾಯತಿಗೆ ಬಿಡುಗಡೆ ಮಾಡಲು ಸರ್ಕಾರವು ತೀರ್ಮಾನಿಸಿರುತ್ತದೆ.

ಆದ್ದರಿಂದ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ:27/25:ಆರ್‌ಆರ್‌ಸಿ:2014, ಬೆಂಗಳೂರು, ದಿನಾಂಕ:03.03.2015.**

ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಪ್ರಸ್ತುತ 2014–15ನೇ ಸಾಲಿನ ಆರ್ಥಿಕ ವರ್ಷದಲ್ಲಿ ಧಾರವಾಡ ಜಿಲ್ಲಾ ಪಂಚಾಯತಿಯಲ್ಲಿ ಕೈಗೊಂಡ ರಸ್ತೆ ಅಭಿವೃದ್ಧಿ ಕಾಮಗಾರಿಗಳ ಬಿಲ್ ಪಾವತಿಗಾಗಿ ಲೆ.ಶೀ.3054–80–196–1–03–300(ಯೋಜನೆ) ರಡಿ ರೂ.295.00ಲಕ್ಷ (ಎರಡು ನೂರ ತೊಂಭತ್ತೈದು ಲಕ್ಷ ರೂಪಾಯಿಗಳು ಮಾತ್ರ)ಗಳನ್ನು ಕೆಳಕಂಡ ಷರತ್ತಿಗೊಳಪಟ್ಟು ಧಾರವಾಡ ಜಿಲ್ಲಾ ಪಂಚಾಯತಿಗೆ ಬಿಡುಗಡೆ ಮಾಡಲು ಸರ್ಕಾರವು ಹರ್ಷಿಸುತ್ತದೆ.

**ಷರತ್ತುಗಳು:**

1. ಜಿಲ್ಲಾ ಪಂಚಾಯತಿಗಳಿಗೆ ಬಿಡುಗಡೆ ಮಾಡಿದ ಅನುದಾನವನ್ನು 2013–14ನೇ ಸಾಲಿನಲ್ಲಿ ಕೈಗೊಂಡು ಪೂರ್ಣಗೊಳಿಸಿದ ರಸ್ತೆ ಕಾಮಗಾರಿಗಳಿಗೆ ಮಾತ್ರ ಉಪಯೋಗಿಸತಕ್ಕದ್ದು. ಈ ಅನುದಾನವನ್ನು ಮಾರ್ಗ ಪಟ್ಟಲಮಾಡುವಂತಿಲ್ಲ. ಹಾಗೂ ಯಾವುದೇ ಕಾರಣಕ್ಕೂ ವ್ಯಪಗತವಾಗದಂತೆ ನೋಡಿಕೊಳ್ಳತಕ್ಕದ್ದು.
2. ಬಳಕೆಯಾದ ಹಣ ಮತ್ತು ಕಾಮಗಾರಿ ಪ್ರಗತಿಯನ್ನು ಮುಖ್ಯ ಇಂಜಿನಿಯರ್. ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ ರವರಿಗೆ ಒದಗಿಸತಕ್ಕದ್ದು.
3. ಸದರಿ ಕಾಮಗಾರಿಗಳ ಪೂರ್ಣಗೊಂಡಿರುವ ಬಗ್ಗೆ ಮತ್ತು ವಾಸ್ತವವಾಗಿರುವ ಬಾಕಿ ಬಿಲ್ಲುಗಳ ತನಿಖೆ ಮಾಡಿ ವರದಿ ನೀಡತಕ್ಕದ್ದು.
4. ಪ್ರಸ್ತುತ ಈ ಶೀರ್ಷಿಕೆಯಡಿ ಜಿಲ್ಲಾ ಪಂಚಾಯತಿ ಅನುಷ್ಠಾನಗೊಳಿಸಿರುವ ರಸ್ತೆ ಕಾಮಗಾರಿಗಳನ್ನು Worksoft works monitoring ಪದ್ಧತಿ ಮುಖಾಂತರ ಉಸ್ತುವಾರಿ ಮಾಡಬೇಕಾಗಿದ್ದು, ಈ ಸಂಬಂಧ ಪೂರ್ಣ ಮಾಹಿತಿಯನ್ನು Worksoft website ನಲ್ಲಿ ತಪ್ಪದೇ ಅಳವಡಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆ ಟಿಪ್ಪಣಿ ಕಂಡಿಕೆ ಸಂಖ್ಯೆ:ಆಇ:230:ವೆಚ್ಚ-6:2014, ದಿನಾಂಕ:02.03.2015 ರಲ್ಲಿ ತಿಳಿಸಿದ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಬೂವನಹಳ್ಳಿ ನಾಗರಾಜ್)
ನಿರ್ದೇಶಕರು
ಸುವರ್ಣ ಗ್ರಾಮೋದಯ ಯೋಜನೆ ಹಾಗೂ
ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಪ್ರತಿಯನ್ನು:

1. ಮಹಾಲೇಖಪಾಲರು (ಲೆಕ್ಕಪತ್ರ), ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಆಡಿಟ್-1), ಕರ್ನಾಟಕ, ಬೆಂಗಳೂರು.
3. ಮಹಾಲೇಖಪಾಲರು (ಆಡಿಟ್-2), ಕರ್ನಾಟಕ, ಬೆಂಗಳೂರು.
4. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
5. ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು, ವಿಧಾನ ಸೌಧ, ಬೆಂಗಳೂರು
6. ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು
7. ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ (PMU)(IF),5ನೇ ಹಂತ, ಬಹುಮಹಡಿ ಕಟ್ಟಡ, ಬೆಂಗಳೂರು
8. ಅಪರ ಮುಖ್ಯ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
9. ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
10. ವಿಶೇಷಾಧಿಕಾರಿಗಳು (ಜಿಪಂ) ಮತ್ತು ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ, ಆರ್ಥಿಕ ಇಲಾಖೆ ವಿಧಾನ ಸೌಧ, ಬೆಂಗಳೂರು
11. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
12. ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು.
13. ಉಪ ನಿರ್ದೇಶಕರು, ನೆಟ್‌ವರ್ಕ್ ಮ್ಯಾನೇಜ್‌ಮೆಂಟ್ ಸೆಂಟರ್, ಟ್ರೆಜರಿ ಡಿಪಾರ್ಟ್‌ಮೆಂಟ್, ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
14. ಜಿಲ್ಲಾ ಖಜಾನಾಧಿಕಾರಿಗಳು, ಧಾರವಾಡ ಜಿಲ್ಲೆ.
15. ಅಧೀನ ಕಾರ್ಯದರ್ಶಿಗಳು (ವೆಚ್ಚ-6), ಜಿ.ಪಂ. ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
16. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು-9
17. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಧಾರವಾಡ.
18. ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಧಾರವಾಡ.
19. ಮಾಹಿತಿ ಕೇಂದ್ರದ ಗಣಕ ಕೋಶ ಮುಖ್ಯಸ್ಥರು, ಗ್ರಾಅಪಂರಾ ಇಲಾಖೆ ಇವರಿಗೆ ಇಲಾಖೆಯ ಅಂತರ್ಜಾಲದಲ್ಲಿ ಅಳವಡಿಸಲು ಹಾಗೂ ಗ್ರೂಪ್ ಮೈಲ್ ನಲ್ಲಿ ರವಾನಿಸಲು ಸೂಚಿಸಿದೆ
20. ರಕ್ಷಾ ಕಡತ / ಹೆಚ್ಚುವರಿ ಪ್ರತಿ.